# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)ಪಿಆರ್/29/18-19

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ: 4/7/18

## ಸುತ್ತೋಲೆ

ವಿಷಯ: ಆರನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಪಾಲಿಕೆಯಲ್ಲಿ ಅಳವಡಿಸಿಕೊಂಡಿರುವ ಬಗ್ಗೆ.

ಉಲ್ಲೇಖ: ಈ ಕಛೇರಿ ಆದೇಶ ಸಂಖ್ಯೆ: ಬಿ12(5ಜಿ)ಪಿಆರ್/206/2009-10/18-19, ದಿನಾಂಕ:19-06-2018.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಆರನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ ವೇತನ ಶ್ರೇಣಿಗಳ ಪರಿಷ್ಕರಣೆ ಮತ್ತು ಸಂಬಂಧಿತ ಆದೇಶಗಳ ಸಂಬಂಧ ಸರ್ಕಾರದ ಆರ್ಥಿಕ ಇಲಾಖೆಯ ಆದೇಶವನ್ನು ಉಲ್ಲೇಖಿತದಂತೆ ಪಾಲಿಕೆಯಲ್ಲಿ ಅಳವಡಿಸಿಕೊಂಡಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ಸಿಬ್ಬಂದಿಗಳಿಗೆ ವೇತನ ಪಾವತಿಸುವ ಸಂಬಂಧ, ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಈ ಕೆಳಕಂಡಂತೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದೆ. ಹಾಗೂ ಈ ಕೆಳಕಂಡ ಕ್ರಮಗಳನ್ನು ಕೈಗೊಂಡ ನಂತರವೇ ವೇತನವನ್ನು ಪಾವತಿಸಲು ಸಾಧ್ಯವಾಗುವುದರಿಂದ ದಿನಾಂಕ: 07-07-2018 ರೊಳಗಾಗಿ HRMS ನಲ್ಲಿ Update ಮಾಡಲು ಸೂಚಿಸಿದೆ. ಹಾಗೂ ಈ ಬಗ್ಗೆ ಯಾವುದಾದರೂ ವೇತನ ಶ್ರೇಣಿಯಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಈ ಕಛೇರಿಯನ್ನು ಸಂಪರ್ಕಿಸಲು ಸೂಚಿಸಿದೆ.

1. ವೇತನವನ್ನು ಪಾವತಿಸಲು/ಸೃಜಿಸಲು ಈಗಾಗಲೇ ಚಾಲ್ತಿಯಲ್ಲಿರುವ ವೆಬ್ ಸೈಟ್ 218.248.45.166:8092/**vssHRMS** ಅನ್ನು ಬಳಸುವುದು.
2. ಪ್ರತಿ ಮಾಹೆಯಾನ 3 ಬಿಲ್ಲುಗಳನ್ನು ತಯಾರಿಸುವುದು.
   **ಅ) ಪಾಲಿಕೆಯ ಖಾಯಂ ಅಧಿಕಾರಿ / ನೌಕರರಗಳ ವೇತನದ ಬಿಲ್ಲು.**
   **ಆ) ಎರವಲು ಸೇವೆಯ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ ನೌಕರರುಗಳ ವೇತನದ ಬಿಲ್ಲು.**
   **ಇ) ಸಮಾನ ಕೆಲಸಕ್ಕೆ ಸಮಾನ ವೇತನದಡಿ ಕಾರ್ಯನಿರ್ವಹಿಸುತ್ತಿರುವ ನೌಕರರುಗಳ ಬಿಲ್ಲುಗಳನ್ನು ತಯಾರಿಸುವುದು.**
3. ಪಾಲಿಕೆಯ ಅಧಿಕಾರಿ / ಸಿಬ್ಬಂದಿಗಳ ಹಾಗೂ ಎರವಲು ಸೇವೆಯ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ಸಿಬ್ಬಂಧಿಗಳ **ವೇತನ ಶ್ರೇಣಿ, ಮೂಲ ವೇತನ ಮತ್ತು ವಾರ್ಷಿಕ ವೇತನ ಬಡ್ತಿಯ ದಿನಾಂಕವನ್ನು** ನಮೂದಿಸುವುದು.
4. ಸಮಾನ ಕೆಲಸಕ್ಕೆ ಸಮಾನ ವೇತನದಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ **ವೇತನ ಶ್ರೇಣಿ, ಮೂಲ ವೇತನ ಹಾಗೂ ಖಟಾವಣೆಗಳನ್ನು** ನಮೂದಿಸುವುದು.

ಅಪರ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು : ಮಾಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಮಾನ್ಯ ಆಯುಕ್ತರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಮಾನ್ಯ ವಿಶೇಷ ಆಯುಕ್ತರು (ಯೋಜನೆ) / (ಹಣಕಾಸು) ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಮಾನ್ಯ ಅಪರ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಅಧ್ಯಕ್ಷರು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸ್ಥಾಯಿ ಸಮಿತಿ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.

: ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸುತ್ತಾ, ಪಾಲಿಕೆಯ ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರು, ಮಾನ್ಯ ಆಡಳಿತ ಪಕ್ಷದ ನಾಯಕರು, ಮಾನ್ಯ ವಿರೋಧ ಪಕ್ಷದ ನಾಯಕರು ರವರುಗಳ ಅವಗಾಹನೆಗೆ ತರಲು ಕೋರಿದೆ.

: ಎಲ್ಲಾ ವಲಯ ಅಪರ / ಜಂಟಿ / ಉಪ ಆಯುಕ್ತರುಗಳಿಗೆ ಕಳುಹಿಸುತ್ತಾ, ತಮ್ಮ ಅಧೀನದಲ್ಲಿ ಬರುವ ಬಟವಾಡೆ ಅಧಿಕಾರಿಗಳಿಗೆ ಸುತ್ತೋಲೆಯಲ್ಲಿ ತಿಳಿಸಿರುವಂತೆ ಕ್ರಮವಹಿಸಲು ಸೂಚಿಸುವಂತೆ ತಿಳಿಸಿದೆ.

: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಮಾಹಿತಿಗೆ ಕಳುಹಿಸಿದೆ.

: ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಮಾಹಿತಿಗೆ ಹಾಗೂ ಅಗತ್ಯ ಕ್ರಮಕ್ಕೆ ಕಳುಹಿಸಿದೆ.

: ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ ಕಳುಹಿಸಿದೆ.

: ಮುಖ್ಯ ಲೆಕ್ಕಾಧಿಕಾರಿಗಳಿಗೆ / ಮುಖ್ಯ ಲೆಕ್ಕ ಪರಿಶೋಧಕರಿಗೆ / ಉಪ ನಿಯಂತ್ರಕರು (ಹಣಕಾಸು) ರವರುಗಳಿಗೆ ಮಾಹಿತಿಗೆ ಕಳುಹಿಸಿದೆ.

: ಎಲ್ಲಾ ವಲಯ ಸ.ನಿ.(ಹಣಕಾಸು) ರವರಿಗೆ ಮಾಹಿತಿಗೆ ಕಳುಹಿಸಿದೆ.

: ಮಾಹಿತಿ ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ ಪಾಲಿಕೆಯ ವೆಬ್ ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.

: ಕಛೇರಿ ಪ್ರತಿ.